# All India Radio: Bangalore
# National Bulletin In Kannada
## 21.04.2026  19.35 p.m.
### ಆಕಾಶವಾಣಿ, ಬೆಂಗಳೂರು
### ರಾಷ್ಟ್ರೀಯ ವಾರ್ತೆಗಳು
## 21.04.2026  19.35 p.m.
****************

ಮುಖ್ಯಾಂಶಗಳು

೧.	ಸಮಾಜದ ಪ್ರತಿಯೊಂದು ವರ್ಗದ ಅಭಿವೃದ್ಧಿಯಿಂದ ಮಾತ್ರ ರಾಷ್ಟ್ರದ ಪ್ರಗತಿ ಸಾಧ್ಯ - ರಾಷ್ಟ್ರಪತಿ ದ್ರೌಪದಿ ಮುರ್ಮು

೨.	ತಮಿಳುನಾಡು ವಿಧಾನಸಭೆ ಮತ್ತು ಪಶ್ಚಿಮ ಬಂಗಾಳದ ಮೊದಲ ಹಂತದ ವಿಧಾನಸಭಾ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ತೆರೆ

೩.	ಟಿ-೭೨ ಮತ್ತು ಟಿ-೯೦ ಟ್ಯಾಂಕ್‌ಗಳಿಗೆ ಟ್ರಾಲ್ ಅಸೆಂಬ್ಲಿಗಾಗಿ ರಕ್ಷಣಾ ಸಚಿವಾಲಯದಿಂದ ೯೭೫ ಕೋಟಿ ರೂಪಾಯಿ ಒಪ್ಪಂದ

೪.	ಕೇರಳದ ತ್ರಿಶೂರ್‌ನ ಪಟಾಕಿ ತಯಾರಿಕಾ ಘಟಕದಲ್ಲಿ ಸ್ಫೋಟ; ಕನಿಷ್ಠ ೧೨ ಮಂದಿ ಸಾವು - ಪ್ರಧಾನಿ ಸಂತಾಪ

೫.	ಐಪಿಎಲ್ ಟಿ-೨೦ ಕ್ರಿಕೆಟ್; ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡ ಫೀಲ್ಡಿಂಗ್ ಆಯ್ಕೆ

****************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದು ಒಡಿಶಾದ ರೂರ್ಕೆಲಾದಲ್ಲಿಂದು ಬುಡಕಟ್ಟು ವಸ್ತು ಸಂಗ್ರಹಾಲಯ ಹಾಗೂ ಸಮಗ್ರ ಕಮಾಂಡ್ ಮತ್ತು ನಿಯಂತ್ರಣ ಕೇಂದ್ರವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬುಡಕಟ್ಟು ವಸ್ತು ಸಂಗ್ರಹಾಲಯ ಒಡಿಶಾದ ಬುಡಕಟ್ಟು ಜನರ ಆತ್ಮ, ಸಂಸ್ಕೃತಿ ಮತ್ತು ಹೆಮ್ಮೆಯ ಜೀವಂತ ಸಂಕೇತವಾಗಿದೆ. ಸಮಗ್ರ ಕಮಾಂಡ್ ಮತ್ತು ನಿಯಂತ್ರಣ ಕೇಂದ್ರ ನಗರದ ಸಂಚಾರ ವ್ಯವಸ್ಥೆಯನ್ನು ಸಮರ್ಥವಾಗಿ ನಿರ್ವಹಿಸಲು ಸಹಕಾರಿಯಾಗಲಿದೆ ಎಂದರು.

ರೂರ್ಕೆಲಾದಲ್ಲಿ ನಡೆದ ಸಾರ್ವಜನಿಕ ಸಮಾರಂಭದಲ್ಲಿ ರಾಷ್ಟ್ರಪತಿ, ಆಧುನಿಕ ತಾರಾಲಯ ಹಾಗೂ ವಿಜ್ಞಾನ ಕೇಂದ್ರ ಮತ್ತು ನಿರ್ಮಲ್ ಮುಂಡಾ ಪರಿವೇಶ್ ಪಥವನ್ನು ಉದ್ಘಾಟಿಸಿದರು. ಸಮಾಜದ ಪ್ರತಿಯೊಂದು ವರ್ಗದ ಅಭಿವೃದ್ಧಿಯಿಂದ ಮಾತ್ರ ರಾಷ್ಟ್ರದ ಪ್ರಗತಿ ಸಾಧ್ಯ ಎಂದು ಪ್ರತಿಪಾದಿಸಿದ ರಾಷ್ಟ್ರಪತಿ, ದೇಶದ ಅಭಿವೃದ್ಧಿಯಲ್ಲಿ ಪ್ರತಿಯೊಬ್ಬರು ಸಕ್ರೀಯವಾಗಿ ಪಾಲ್ಗೊಳ್ಳುವಂತೆ ಕರೆ ನೀಡಿದರು.

****************

ತಮಿಳುನಾಡು ವಿಧಾನಸಭೆ ಚುನಾವಣೆ ಮತ್ತು ಪಶ್ಚಿಮ ಬಂಗಾಳದ ಮೊದಲ ಹಂತದ ಮತದಾನಕ್ಕೆ ನಡೆಯುತ್ತಿದ್ದ ಬಹಿರಂಗ ಪ್ರಚಾರಕ್ಕೆ ಇಂದು ಸಂಜೆ ಅಧಿಕೃತವಾಗಿ ತೆರೆ ಬಿದ್ದಿದೆ. ತಮಿಳುನಾಡಿನ ಎಲ್ಲಾ ಕ್ಷೇತ್ರಗಳಿಗೆ ಏಕಹಂತದಲ್ಲಿ ಹಾಗೂ ಪಶ್ಚಿಮ ಬಂಗಾಳದ ಮೊದಲ ಹಂತದ ಕ್ಷೇತ್ರಗಳಿಗೆ ಗುರುವಾರ ಮತದಾನ ನಡೆಯಲಿದ್ದು, ಪ್ರಚಾರದ ಅಂತಿಮ ದಿನವಾದ ಇಂದು ವಿವಿಧ ರಾಜಕೀಯ ಪಕ್ಷಗಳ ಪ್ರಮುಖ ನಾಯಕರು ಮತದಾರರನ್ನು ಸೆಳೆಯಲು ಅಂತಿಮ ಹಂತದ ಕಸರತ್ತು ನಡೆಸಿದರು.

ಪಶ್ಚಿಮ ಬಂಗಾಳದಲ್ಲಿ ಕೇಂದ್ರ ಗೃಹ ಸಚಿವ ಮತ್ತು ಬಿಜೆಪಿ ಹಿರಿಯ ನಾಯಕ ಅಮಿತ್ ಶಾ, ಪಶ್ಚಿಮ ಬರ್ಧಮಾನ್ ಜಿಲ್ಲೆಯ ಕುಲ್ಟಿ ಮತ್ತು ಸಿಲಿಗುರಿಯಲ್ಲಿ ಬೃಹತ್ ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಿದರೆ, ಬಿಜೆಪಿ ನಾಯಕಿ ರೇಖಾ ಗುಪ್ತಾ ಅವರು ಅಸನ್ಸೋಲ್‌ನಲ್ಲಿ ನಡೆದ ರೋಡ್ ಶೋನಲ್ಲಿ ಪಾಲ್ಗೊಂಡಿದ್ದರು. ಮತ್ತೊಂದೆಡೆ, ತೃಣಮೂಲ ಕಾಂಗ್ರೆಸ್ ಅಧ್ಯಕ್ಷೆ ಹಾಗೂ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ, ಹಲ್ದಿಯಾದಲ್ಲಿ ಸಾರ್ವಜನಿಕ ಸಭೆ ನಡೆಸಿ ಮತಯಾಚಿಸಿದರು. ಕಾಂಗ್ರೆಸ್ ಮತ್ತು ಎಡಪಕ್ಷಗಳು ಸೇರಿದಂತೆ ಇತರ ಪಕ್ಷಗಳ ಅಭ್ಯರ್ಥಿಗಳ ಪರವಾಗಿಯೂ ರಾಜ್ಯಾದ್ಯಂತ ಪ್ರಚಾರ ಕಾರ್ಯಗಳು ನಡೆದವು.

ತಮಿಳುನಾಡಿನಲ್ಲಿ ಕೇಂದ್ರ ಸಚಿವ ಪಿಯೂಷ್ ಗೋಯಲ್ ಪ್ರಚಾರದಲ್ಲಿ ತೊಡಗಿಸಿಕೊಂಡಿದ್ದರೆ, ಎಐಎಡಿಎಂಕೆ ಪ್ರಧಾನ ಕಾರ್ಯದರ್ಶಿ ಎಡಪ್ಪಾಡಿ ಪಳನಿಸ್ವಾಮಿ ಸೇಲಂನಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಇದೇ ವೇಳೆ ಟಿವಿಕೆ ಸಂಸ್ಥಾಪಕ ಹಾಗೂ ನಟ ವಿಜಯ್, ಚೆನ್ನೈನಲ್ಲಿ ತಮ್ಮ ಪಕ್ಷದ ಪರವಾಗಿ ಬಿರುಸಿನ ಮತಯಾಚನೆ ನಡೆಸಿದರು. ಬಹಿರಂಗ ಪ್ರಚಾರ ಅಂತ್ಯಗೊಂಡಿರುವ ಹಿನ್ನೆಲೆಯಲ್ಲಿ

ಎರಡೂ ರಾಜ್ಯಗಳಲ್ಲಿ ಇದೀಗ ಮನೆ-ಮನೆ ಪ್ರಚಾರದ ಹಂತ ಆರಂಭವಾಗಿದ್ದು, ಗುರುವಾರದ ಮತದಾನಕ್ಕೆ ಚುನಾವಣಾ ಆಯೋಗವು ಸಕಲ ಸಿದ್ಧತೆಗಳನ್ನು ಕೈಗೊಂಡಿದೆ.

***************

ತಮಿಳುನಾಡು ಮತ್ತು ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆಗಳ ಹಿನ್ನೆಲೆಯಲ್ಲಿ ಭಾರತೀಯ ಚುನಾವಣಾ ಆಯೋಗ ಇಂದು ಅಂತಾರಾಷ್ಟ್ರೀಯ ಚುನಾವಣಾ ಸಂದರ್ಶಕರ ಕಾರ್ಯಕ್ರಮ ಎರಡನೇ ಹಂತಕ್ಕೆ ಚಾಲನೆ ನೀಡಿದೆ.

ನವದೆಹಲಿಯ ಭಾರತ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ಮತ್ತು ಚುನಾವಣಾ ನಿರ್ವಹಣಾ ಸಂಸ್ಥೆಯಲ್ಲಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಈ ಕಾರ್ಯಕ್ರಮವನ್ನು ಉದ್ಘಾಟಿಸಿದರು. ದೆಹಲಿಯಲ್ಲಿರುವ ವಿವಿಧ ರಾಯಭಾರ ಕಚೇರಿಗಳ ಪ್ರತಿನಿಧಿಗಳು ಸೇರಿದಂತೆ ಒಟ್ಟು ೧೭ ರಾಷ್ಟ್ರಗಳ ೩೪ ಪ್ರತಿನಿಧಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದಾರೆ ಎಂದು ಆಯೋಗ ತಿಳಿಸಿದೆ.

ಈ ಕಾರ್ಯಕ್ರಮದ ಅಂಗವಾಗಿ ವಿದೇಶಿ ಪ್ರತಿನಿಧಿಗಳಿಗೆ ವಿದ್ಯುನ್ಮಾನ ಮತ ಯಂತ್ರಗಳ ಕಾರ್ಯವೈಖರಿಯ ಬಗ್ಗೆ ಪ್ರಾತ್ಯಕ್ಷಿಕೆ ನೀಡಲಾಯಿತು ಮತ್ತು ಮತದಾನ ಪ್ರಕ್ರಿಯೆಯ ನೇರ ಅನುಭವ ಪಡೆಯಲು ಅವರು ಅಣಕು ಮತದಾನದಲ್ಲಿ ಪಾಲ್ಗೊಂಡಿದ್ದರು.

ಈ ಪ್ರತಿನಿಧಿಗಳ ತಂಡ ನಾಳೆ ಪಶ್ಚಿಮ ಬಂಗಾಳ ಮತ್ತು ತಮಿಳುನಾಡಿಗೆ ಪ್ರಯಾಣಿಸಲಿದ್ದು, ಅಲ್ಲಿನ ಚುನಾವಣಾ ಸಾಮಗ್ರಿ ವಿತರಣಾ ಕೇಂದ್ರ, ಜಿಲ್ಲಾ ನಿಯಂತ್ರಣ ಕೊಠಡಿ ಮತ್ತು ಮಾಧ್ಯಮ ವೀಕ್ಷಣಾ ಕೇಂದ್ರಗಳಿಗೆ ಭೇಟಿ ನೀಡಲಿದೆ. ಇದೇ ೨೩ ರಂದು ನಡೆಯಲಿರುವ ನೇರ ಮತದಾನ ಪ್ರಕ್ರಿಯೆಯನ್ನು ಈ ತಂಡ ವೀಕ್ಷಿಸಲಿದೆ.

***************

ಭಾರತೀಯ ಸೇನೆಯ ಸಾಮರ್ಥ್ಯ ಹೆಚ್ಚಿಸಲು ರಕ್ಷಣಾ ಸಚಿವಾಲಯ ಟಿ-೭೨ ಮತ್ತು ಟಿ-೯೦ ಯುದ್ಧ ಟ್ಯಾಂಕ್‌ಗಳಿಗಾಗಿ ಟ್ರಾಲ್ ಅಸೆಂಬ್ಲಿಗಳನ್ನು ಖರೀದಿಸಲು ಬಿಇಎಂಎಲ್ ಮತ್ತು ಎಲೆಕ್ಟ್ರೊ ನ್ಯೂಮ್ಯಾಟಿಕ್ಸ್ ಸಂಸ್ಥೆಗಳೊಂದಿಗೆ ೯೭೫ ಕೋಟಿ ರೂಪಾಯಿಗಳ ಒಪ್ಪಂದ ಮಾಡಿಕೊಂಡಿದೆ.

ಡಿಆರ್‌ಡಿಒ ಅಭಿವೃದ್ಧಿ ಪಡಿಸಿರುವ ಈ ತಂತ್ರಜ್ಞಾನ ಯುದ್ಧ ಭೂಮಿಯಲ್ಲಿನ ಸಿಡಿಗುಂಡುಗಳನ್ನು ನಿಷ್ಕ್ರಿಯಗೊಳಿಸಿ ಸೇನಾ ವಾಹನಗಳಿಗೆ ಸುರಕ್ಷಿತ ಹಾದಿ ನಿರ್ಮಿಸಲು ನೆರವಾಗಲಿದೆ ಎಂದು ರಕ್ಷಣಾ ಸಚಿವ ಮಾಹಿತಿ ನೀಡಿದೆ.

ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಅವರ ಸಮ್ಮುಖದಲ್ಲಿ ಈ ಒಪ್ಪಂದಗಳಿಗೆ ಸಹಿ ಹಾಕಲಾಯಿತು.

ಈ ಯೋಜನೆ ಆತ್ಮನಿರ್ಭರ ಭಾರತ ಅಭಿಯಾನಕ್ಕೆ ಮತ್ತಷ್ಟು ಪುಷ್ಠಿನೀಡಲಿದ್ದು, ಬಿಡಿ ಭಾಗಗಳ ತಯಾರಿಕೆಗಳಲ್ಲಿ ತೊಡಗಿರುವ ಸಣ್ಣ, ಅತಿ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಉತ್ತೇಜನ ನೀಡುವ ಮೂಲಕ ನೇರ ಮತ್ತು ಪರೋಕ್ಷ ಉದ್ಯೋಗ ಸೃಷ್ಟಿಗೆ ಸಹಕಾರಿಯಾಗಲಿದೆ.

***************

ಜರ್ಮನಿಯ ಮೂರು ದಿನಗಳ ಅಧಿಕೃತ ಪ್ರವಾಸದಲ್ಲಿರುವ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ಬರ್ಲಿನ್ ತಲುಪಿದ್ದಾರೆ.

ಮ್ಯೂನಿಚ್‌ನಿಂದ ಬರ್ಲಿನ್‌ಗೆ ಪ್ರಯಾಣಿಸುವ ವೇಳೆ ಜರ್ಮನ್ ವಾಯುಪಡೆಯ ವಿಶೇಷ ವಿಮಾನದಲ್ಲಿ ಅವರನ್ನು ಕರೆದೊಯ್ಯಲಾಯಿತು. ಯುದ್ಧವಿಮಾನಗಳ ಬೆಂಗಾವಲಿನೊಂದಿಗೆ ಮಿಲಿಟರಿ ಗೌರವ ವಂದನೆ ಸ್ವೀಕರಿಸಿರುವುದಾಗಿ ಸಚಿವರು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

ತಮ್ಮ ಭೇಟಿಯ ವೇಳೆ ಸಚಿವ ರಾಜನಾಥ್ ಸಿಂಗ್, ಜರ್ಮನಿಯ ರಕ್ಷಣಾ ಸಚಿವ ಬೋರಿಸ್ ಪಿಸ್ಟೋರಿಯಸ್ ಮತ್ತು ಇತರ ಹಿರಿಯ ನಾಯಕರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

ಈ ವೇಳೆ ಉಭಯ ರಾಷ್ಟ್ರಗಳ ನಡುವಿನ ಕಾರ್ಯತಂತ್ರದ ರಕ್ಷಣಾ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ರಕ್ಷಣಾ ಕೈಗಾರಿಕಾ ಸಹಕಾರ ಮಾರ್ಗಸೂಚಿ ಮತ್ತು ವಿಶ್ವ ಸಂಸ್ಥೆಯ ಶಾಂತಿ ಪಾಲನಾ ಕಾರ್ಯಚಾರಣೆಗಳ ತರಬೇತಿ ಸಹಕಾರ ಕುರಿತಾದ ಒಪ್ಪಂದಗಳಿಗೆ ಸಹಿ ಹಾಕುವ ನಿರೀಕ್ಷೆ ಇದೆ. ಇದರ ಜೊತೆಗೆ ಮೆಕ್ ಇನ್ ಇಂಡಿಯಾ ಉಪಕ್ರಮದಡಿ ಜಂಟಿ ಅಭಿವೃದ್ಧಿ ಮತ್ತು ಸಹ ಉತ್ಪಾದನೆಯನ್ನು ಉತ್ತೇಜಿಸಲು ಜರ್ಮನಿಯ ರಕ್ಷಣಾ ಉದ್ಯಮದ ಪ್ರಮುಖ ಪ್ರತಿನಿಧಿಗಳೊಂದಿಗೆ ಸಚಿವರು ಸಂವಾದ ನಡೆಸಲಿದ್ದಾರೆ.

***************

ದೇಶಾದ್ಯಂತ ಗೃಹ ಬಳಕೆಯ ಎಲ್‌ಪಿಜಿ ಪೂರೈಕೆಯು ಸಹಜವಾಗಿದ್ದು, ದೇಶದ ಯಾವುದೇ ಎಲ್‌ಪಿಜಿ ಪೂರೈಕೆ ವಿತರಕರಲ್ಲಿ ಅನಿಲದ ಕೊರತೆ ವರದಿಯಾಗಿಲ್ಲ ಎಂದು ಕೇಂದ್ರ ಸರ್ಕಾರ ಮಾಹಿತಿ ನೀಡಿದೆ.

ಪಶ್ಚಿಮ ಏಷ್ಯಾದ ಇತ್ತೀಚಿನ ಬೆಳವಣಿಗೆಗಳ ಕುರಿತು ನವದೆಹಲಿಯಲ್ಲಿ ನಡೆದ ಅಂತರ್ ಸಚಿವಾಲಯ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ, ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ಮತ್ತು ಎಲ್‌ಪಿಜಿ ಬೆಲೆಗಳು ಏರಿಕೆಯಾಗಿದ್ದರೂ ಯಾವುದೇ ಅಡೆತಡೆ ಇಲ್ಲದೇ ದೇಶೀಯ ಎಲ್‌ಪಿಜಿ ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಶ್ರಮಿಸುತ್ತಿದೆ ಎಂದರು.

ಇದೇ ವೇಳೆ ಮಾತನಾಡಿದ ಪಶುಸಂಗೋಪನೆ ಮತ್ತು ಹೈನುಗಾರಿಕೆ ಇಲಾಖೆಯ ನಿರ್ದೇಶಕಿ ಪೂಜಾ ರಸ್ತೋಗಿ, ಪಶ್ಚಿಮ ಏಷ್ಯಾ ಪರಿಸ್ಥಿತಿ ನಡುವೆ ದೇಶಾದ್ಯಂತ ಹಾಲಿನ ಸಂಗ್ರಹಣೆ, ಸಂಸ್ಕರಣೆ ಮತ್ತು ಪೂರೈಕೆ ಯಾವುದೇ ಅಡೆತಡೆಯಿಲ್ಲದೇ ಸಾಗುತ್ತಿದೆ. ಹಾಲು ಮತ್ತು ಅದರ ಉತ್ಪನ್ನಗಳ ಬೆಲೆಗಳು ಸ್ಥಿರವಾಗಿವೆ ಎಂದು ಮಾಹಿತಿ ನೀಡಿದರು.

***************

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ನಾಳೆ ಒಂದು ದಿನಕ್ಕಾಗಿ ಕರ್ನಾಟಕ ಪ್ರವಾಸ ಕೈಗೊಳ್ಳಲಿದ್ದು, ಬೀದರ್‌ನ ಚೆನ್ನಬಸವ ದೇವರ ಸಮಾಧಿ ಬಳಿ ನಡೆಯಲಿರುವ ಡಾ.ಬಸವಲಿಂಗ ಸ್ವಾಮೀಜಿ ಅವರ ೭೫ನೇ ವರ್ಷದ ಸಂಭ್ರಮಾಚರಣೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ಬಳಿಕ ಕಲಬುರಗಿಗೆ ತೆರಳಲಿರುವ ಅವರು, ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಹತ್ತನೇ ಘಟಿಕೋತ್ಸವದಲ್ಲಿ ಘಟಿಕೋತ್ಸವ ಭಾಷಣ ಮಾಡಲಿದ್ದಾರೆ. ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ.

***************

ಕೇರಳದ ತ್ರಿಶೂರಿನ ಮುಂಡತಿಕ್ಕೊಡುವಿನಲ್ಲಿರುವ ಪಟಾಕಿ ತಯಾರಿಕಾ ಘಟಕದಲ್ಲಿ ಸಂಭವಿಸಿದ ಭೀಕರ ಸ್ಫೋಟದಲ್ಲಿ ಕನಿಷ್ಠ ೧೨ ಮಂದಿ ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದಾರೆ.

ವಾರ್ಷಿಕ ಹಿಂದೂ ದೇವಸ್ಥಾನದ ಉತ್ಸವದ ಭಾಗವಾಗಿ ನಡೆಯುವ ತ್ರಿಶೂರ್ ಪೂರಂ ಸಿದ್ಧತೆಯ ವೇಳೆ ಈ ದುರಂತ ಸಂಭವಿಸಿದೆ.

ಪ್ರಾಥಮಿಕ ವರದಿಯ ಪ್ರಕಾರ ಸುಮಾರು ೪೦ ಮಂದಿ ಗಾಯಗೊಂಡಿದ್ದಾರೆ. ಘಟನೆ ಹಾಗೂ ಮೃತಪಟ್ಟವರ ಕುರಿತು ಪ್ರಧಾನಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದು, ಗಾಯಗೊಂಡವರ ಶೀಘ್ರ ಚೇತರಿಕೆಗೆ ಆಗ್ರಹಿಸಿದ್ದಾರೆ.

****************

ಹೈದರಾಬಾದ್‌ನ ರಾಜೀವ್‌ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

*******